# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಹೆಚ್ಚುವರಿ ನಿರ್ದೇಶಕರು(ನಗರ ಯೋಜನೆ) ರವರ ಕಛೇರಿ,ಮಹಾನಗರ ಪಾಲಿಕೆ,ಎನ್.ಆರ್. ವೃತ್ತ,ಬೆಂಗಳೂರು-02.**

ಸಂಖ್ಯೆ: ಜೆಡಿಟಿಪಿ (ದ)/ಪ್ರಾ.ಪ/ಸನಿ/63/2015-16 ದಿನಾಂಕ: 10-12-2015.

## ಭಾಗಶಃ ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಆಸ್ತಿ ಸಂಖ್ಯೆ 1, ರಾಜಾಜಿನಗರದ ಇಂಡಸ್ಟ್ರಿಯಲ್ ಸಬ್‌ಅರ್ಬ್, ವಾರ್ಡ್ ಸಂಖ್ಯೆ 67 (ಹಳೆ ವಾರ್ಡ್ ಸಂಖ್ಯೆ 14), ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಪರಿಷ್ಕೃತ ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD South/ 0020/12-13 ದಿ: 25-09-14.

2) ಅರ್ಜಿದಾರರ ಮನವಿ ದಿನಾಂಕ: 05-11-2015 ಮತ್ತು 09-11-2015.

3) ಅಪರ ನಿರ್ದೇಶಕರು, ನಗರ ಯೋಜನೆ ರವರ ಆದೇಶ ದಿನಾಂಕ: 26-11-2015.

*****

ರಾಜಾಜಿನಗರದ ಇಂಡಸ್ಟ್ರಿಯಲ್ ಸಬ್‌ಅರ್ಬ್, ವಾರ್ಡ್ ಸಂಖ್ಯೆ 67 (ಹಳೆ ವಾರ್ಡ್ ಸಂಖ್ಯೆ 14) ರಲ್ಲಿರುವ ಆಸ್ತಿ ಸಂಖ್ಯೆ 1 ಇಲ್ಲಿ ನಿರ್ಮಿಸುತ್ತಿರುವ Block 1 - 3B+G+25 UF, Block 1a 4B+G , Block 1b 3B+G, Block 1c 3B+G, Tower 2 3B+G+30 UF, Block 3 3B+G+29 UF, Block 3a 3B+G+29 UF, Block 3b 2B+G+29 UF, Block 3c 2B+G+29 UF, Block 3d 2B+G+29 UF, Club House 2B+G+2UF, Guest room Block & G+1 UF ಕಟ್ಟಡಕ್ಕೆ ನಕ್ಷೆ ಸಂಖ್ಯೆ: BBMP/ Addl.Dir/JD South/ 0020/12-13 ದಿ: 25-09-2014 ರಂದು ಪರಿಷ್ಕೃತ ನಕ್ಷೆ ಮಂಜೂರಾತಿ ನೀಡಲಾಗಿದೆ. ಬ್ಲಾಕ್ 1 ಮತ್ತು ಬ್ಲಾಕ್ 2 ರ ವಸತಿ ಸಮುಚ್ಚಯ ಕಟ್ಟಡಕ್ಕೆ ನೀಡುವ ಸಲುವಾಗಿ ಕಟ್ಟಡದ ಸ್ಥಳವನ್ನು ದಿನಾಂಕ: 17-11-2015 ರಂದು ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರು ಮತ್ತು ಸಹಾಯಕ ಅಭಿಯಂತರರವರೊಂದಿಗೆ ಸ್ಥಳ ಪರಿಶೀಲಿಸಿದ್ದು, ವಲಯ ನಿಯಮಾವಳಿಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ಅಳವಡಿಸಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 4,10,000/- ಗಳನ್ನು ಅರ್ಜಿದಾರರು ರಸೀದಿ ಸಂಖ್ಯೆ: RE-ifms624-TP/000060 ದಿನಾಂಕ: 04-12-2015 ರಂದು ಭರಿಸಿದ್ದು, ಸಂದಾಯಿಸಿ ಕೊಳ್ಳಲಾಗಿದೆ. ಬ್ಲಾಕ್ 1 ಮತ್ತು ಬ್ಲಾಕ್ 2 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

10/12

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

10/12 10/12

ಗೆ,

Palladium Constructions Private Limited &
Platinum Hospitallity Services Private Limited
# 1, ರಾಜಾಜಿನಗರದ ಇಂಡಸ್ಟ್ರಿಯಲ್ ಸಬ್‌ಅರ್ಬ್,
ವಾರ್ಡ್ ಸಂಖ್ಯೆ 67 (ಹಳೆ ವಾರ್ಡ್ ಸಂಖ್ಯೆ 14),
ಬೆಂಗಳೂರು.